ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಹುಬ್ಬಳ್ಳಿ ಮಹಾನಗರ ಪಾಲಿಕೆಯ ವ್ಯಾಪ್ತಿಯ ಉಣಕಲ್ ಗ್ರಾಮದ ಪಾಲಿಕೆಯ ಜಮೀನು ಅತಿಕ್ರಮಣ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-

155 (250) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ವ್ಯಾಪ್ತಿಯ ಉಣಕಲ್ ಗ್ರಾಮದ ರಿ.ಸ.ನಂ.53 ಅ, ಸಿಟಿ ಸರ್ವೆ ನಂ. 3121 ಕ್ಷೇತ್ರ 4.38 ಎಕರೆ ಜಮೀನು ಆಸ್ತಿ ಪ್ರಕಟಣಾ ಪತ್ರಿಕೆಯಲ್ಲಿ ಅತಿಕ್ರಮಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇಲ್ಲಿಯವರೆಗೂ ಕ್ರಮಕೈಗೊಳ್ಳದಿರಲು ಕಾರಣವೇನು; ರಿ.ಸ.ನಂ. 53/ಅ, ಸಿ.ಟಿ ಸರ್ವೆ ನಂ 3121 ಇದ್ದದ್ದನ್ನು ಸಿಟಿ ಸರ್ವೆ ನಂ 3116 ಹಾಗೂ ಕ್ಷೇತ್ರವನ್ನು ಆಸ್ತಿ ಪ್ರಕಟಣಾ ಪತ್ರದಲ್ಲಿ ಬದಲಾವಣೆ ಮಾಡಿದ್ದು ನಿಜವೇ ; ನಿಜವಿದ್ದರೆ ಕಾರಣವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಜಮೀನು ಅತಿಕ್ರಮಣ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅದರಲ್ಲಿ ಶಾಮೀಲಾದ ಅಧಿಕಾರಿಗಳು ಯಾರು ಯಾರು, ಅವರ ಹೆಸರು ಮತ್ತು ಹುದ್ದೆ ವಿವರ, ಅವರ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ ; ಅಂತಹ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವಲ್ಲಿ ವಿಳಂಬ ಧೋರಣೆ ತೋರಿ ಸರ್ಕಾರ ಭೂಗಳ್ಳರಿಗೆ ಸಹಾಯ ಮಾಡುತ್ತಿರುವುದು ನಿಜವೇ ; ಈಗಾಲಾದರೂ ಸರ್ಕಾರ ಈ ಬಗ್ಗೆ ಗಮನ ಹರಿಸಿ ತನಿಖೆ ನಡೆಸಿ ತಪ್ಪಿತಸ್ಥರ ಮೇಲೆ ಶಿಸ್ತು ಕ್ರಮ ಜರುಗಿಸುವುದೇ ;

(ಇ) ಸದರಿ ಜಮೀನನ್ನು ಮಹಾನಗರಪಾಲಿಕೆ ಸ್ವಾಧೀನಪಡಿಸಿಕೊಂಡಿದೆಯೇ ; ಸ್ವಾಧೀನಪಡಿಸಿಕೊಂಡಿದ್ದರೆ ಅದರ ಆದೇಶ ಸಂಖ್ಯೆ ಮತ್ತು ದಿನಾಂಕ ಒದಗಿಸುವುದು ಇಲ್ಲದಿದ್ದರೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ ?